RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎಸ್. ಓಲೇಕಾರ | ಸಿಇಒ: ಚಂದ್ರಶೇಖರ ಎಸ್.ಕೆ. | ಸಹ ಸಂಪಾದಕರು: ಶಿವಕುಮಾರ

# ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ಸಾರ್ವಜನಿಕ ಆಸ್ಪತ್ರೆಯಲ್ಲಿ ಆಕಸ್ಮಿಕ ಬೆಂಕಿ ಹಚ್ಚಿ ಹಳೆಯ ಬೆಡ್, ಬೆಡ್‌ಶೀಟ್ ಹಾನಿ 2

ರೈತರ ಆರ್ಥಿಕ ಅಭಿವೃದ್ಧಿಗೆ ಸಹಕಾರ ಸಂಘಗಳು ಬಲ ತುಂಬಲಿ 3

ಮಹಿಳೆಯರು ಸ್ವಾವಲಂಬಿಗಳಾಗಿ ಸ್ವಯಂ ಉದ್ಯೋಗ ಮೂಲಕ ಆರ್ಥಿಕವಾಗಿ ಸಬಲರಾಗಬೇಕು 4

ಸಂಪುಟ (Volume): 1 ಸಂಚಿಕೆ (Issue): 185 ಪುಟ (Page): 4 ದರ Rs. 2 ಶನಿವಾರ 26 ಸೆಪ್ಟೆಂಬರ್ 2026 ● 26 SEPTEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

## ಚುನಾವಣಾ ಆಯೋಗಕ್ಕೆ ಪ್ರಶ್ನೆ ಕೇಳಿದ್ರೆ ಬಿಜೆಪಿ ನಾಯಕರು ಏಕೆ ಉತ್ತರಿಸುತ್ತಾರೆ?

### ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ವಾಗ್ದಾಳಿ

**ಬೆಂಗಳೂರು:** ಚುನಾವಣಾ ಆಯೋಗಕ್ಕೆ ಪ್ರಶ್ನೆ ಕೇಳಿದ್ರೆ ಬಿಜೆಪಿ ನಾಯಕರು ಏಕೆ ಉತ್ತರಿಸುತ್ತಾರೆ? ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತಾಗಿ ಅವರು ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿಮಾತನಾಡಿ,ಕೇಂದ್ರಚುನಾವಣಾಆಯೋಗದ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿದರು.



ನಾವು ಚುನಾವಣಾ ಆಯೋಗದ ಬಗ್ಗೆ ಮಾತನಾಡಿದರೆ, ಅವರ ಪರವಾಗಿ ಸಮರ್ಥನೆಗೆ ನಿಲ್ಲುವುದು ಕೇಂದ್ರ ಬಿಜೆಪಿ ನಾಯಕರು. ನಾವು ಚುನಾವಣಾ ಆಯೋಗಕ್ಕೆ ಪ್ರಶ್ನೆ ಮಾಡಿದರೆ ಆಯೋಗದವರೇ ಉತ್ತರ ನೀಡಬೇಕು. ಆದರೆ ಬಿಜೆಪಿಯವರು ಉತ್ತರ ನೀಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಕೇಂದ್ರಚುನಾವಣಾಆಯೋಗದಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ಕಳೆದ 10 ತಿಂಗಳಲ್ಲಿ 14 ಬಾರಿ ಇನ್ನುಳಿದ ಇಬ್ಬರು ಆಯುಕ್ತರ ಭಿನ್ನಮತವನ್ನು ತಳ್ಳಿಹಾಕಿ ಗೌಪ್ಯವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಸಿರುವುದು ದೇಶದ ನಾಗರೀಕರಿಗೆ ಅಘಾತ ತಂದಿದೆ. ಪ್ರಜಾಪ್ರಭುತ್ವದ ಅಸ್ಥಿತ ಉಳಿಸುವುದು ಆಯೋಗದ ಮೇಲಿರುತ್ತದೆ. ಆದರೆ ಒಂದು ರಾಜಕೀಯ ಪಕ್ಷಕ್ಕೆ ಹಾಗೂ ಒಬ್ಬ ನಾಯಕನಿಗಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನೇ ಬುಡಮೇಲು ಮಾಡಲಾಗಿದೆ.

ಜ್ಞಾನೇಶ್ ಕುಮಾರ್ ಮಾಡಿರುವ ಕೆಲಸ ಬಿಹಾರದಲ್ಲಿ 63 ಲಕ್ಷ ಪಶ್ಚಿಮ ಬಂಗಾಳದಲ್ಲಿ 91 ಲಕ್ಷ ಈಗ ಕರ್ನಾಟಕದಲ್ಲಿ 1.07 ಕೋಟಿ ಮತಗಳನ್ನು ಕಿತ್ತುಹಾಕಲಾಗಿದೆ. ರಾಹುಲ್ ಗಾಂಧಿ ಅವರು ಚುನಾವಣಾ ಆಯೋಗಕ್ಕೆ 2025ರ ಫೆಬ್ರವರಿಯಲ್ಲಿ ಬರೆದ ಪತ್ರದಲ್ಲಿ ಸ್ಪಷ್ಟವಾಗಿ ತಿಳಿಸಿದ್ದರೂ ಪ್ರಜಾಪ್ರಭುತ್ವ ವ್ಯವಸ್ಥೆ ಮೇಲೆ ಗೌರವವಿಲ್ಲದೇ ಆಯೋಗವು ತೆಗೆದುಕೊಂಡಿರುವ ಏಕಪಕ್ಷೀಯ ನಿರ್ಧಾರಗಳನ್ನು ನಾವು ಖಂಡಿಸುತ್ತೇವೆ. ಮಾಧ್ಯಮಗಳಲ್ಲಿ ಎರಡು ದಿನಗಳಿಂದ ಬಂದಿರುವ ವರದಿಗಳ ಪ್ರಕಾರ, ಪ್ರಜಾಪ್ರಭುತ್ವ ಹಾಗೂ ಸಂವಿಧಾನ ವಿರುದ್ಧ ನಡೆ ಸ್ಪಷ್ಟವಾಗಿ ಕಾಣುತ್ತದೆ.

ಇದು ದೇಶದ್ರೋಹ ಕೆಲಸವಾಗಿದ್ದು, ಇದಕ್ಕೆ ಕುಮ್ಮಕ್ಕು ನೀಡಿರುವ ಪ್ರಧಾನಮಂತ್ರಿಗಳು, ಗೃಹಸಚಿವರು, ಚುನಾವಣಾ ಆಯೋಗದ ಕಾರ್ಯ ದೇಶದ್ರೋಹವೆಂದೇ ಪರಿಗಣಿಸಬೇಕಾಗುತ್ತದೆ. ಜ್ಞಾನೇಶ್ ಕುಮಾರ್ ಅವರಿಗೆ ಈಗಾಗಲೇ 2023ರಲ್ಲಿ ಸಂಸತತ್ತಿನಲ್ಲಿ ತೆಗೆದುಕೊಂಡಿರುವ ತೀರ್ಮಾನ ಪ್ರಕಾರ, ಚುನಾವಣಾ ಆಯುಕ್ತರ ಮೇಲೆ ಯಾವುದೇ ಪ್ರಕರಣದಲ್ಲಿ ನಾವು ಕೇಸ್ ದಾಖಲಿಸಿ, ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ. ಹೀಗಾಗಿ ಜ್ಞಾನೇಶ್ ಕುಮಾರ್ ಅವರಿಂದ ತಕ್ಷಣವೇ ಕೇಂದ್ರ ಚುನಾವಣಾ ಆಯೋಗದಿಂದ ರಾಜೀನಾಮೆ ಪಡೆದು ಬಂಧಿಸಬೇಕು. ಇಷ್ಟು ಬಹಿರಂಗವಾಗಿ ಸಂವಿಧಾನ ವಿರುದ್ಧ ಮಾಡಿರುವ ಕೆಲಸವನ್ನು ಖಂಡಿಸಿ ನಾವು ನಾಳೆ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದು, ಬೇರೆ ಪಕ್ಷದವರಿಗೂ ನಾವು ಆಹ್ವಾನ ನೀಡಿದ್ದೇವೆ. ಪ್ರಜಾಪ್ರಭುತ್ವ ವ್ಯವಸ್ಥೆ ಮೇಲೆ ನಂಬಿಕೆ ಇಟ್ಟಿರುವ ಯಾವುದೇ ಪಕ್ಷವಾದರೂ ಈ ಪ್ರತಿಭಟನೆಯಲ್ಲಿ ಭಾಗವಹಿಸಬಹುದು. ಈ ರೀತಿ ಆದರೆ ಮುಂದಿನ ದಿನಗಳಲ್ಲಿ ಚುನಾವಣೆ ಎಂಬುದು ಜಾತಕಪಕ್ಷಿಯಾಗಲಿದೆ.

ಎರಡನೇ ಹಂತದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಪಡೆದು ಬಂಧಿಸಲು ಆಗ್ರಹಿಸಿ ಪ್ರತಿಭಟನೆ ನಡೆಸಲಾಗುವುದು. ಸೆ.23ರಂದು ಪತ್ರಿಕೆಯಲ್ಲಿ ಬಂದ ವರದಿಯಲ್ಲಿ ರಾಹುಲ್ ಗಾಂಧಿ ಅವರು ಈ ಹಿಂದೆ ಹೇಳಿದ್ದ ಅಂಶ ಸ್ಪಷ್ಟವಾಗಿ ಕಾಣುತ್ತಿದೆ. ಸಿಖ್ಬೀರ್ ಸಿಂಗ್ ಹಾಗೂ ವಿವೇಕ್ ಜೋಷಿ ಅವರು 10 ತಿಂಗಳಲ್ಲಿ 14 ಬಾರಿ ಭಿನ್ನಮತ ವ್ಯಕ್ತಪಡಿಸಿದ್ದರೂ ಏಕಪಕ್ಷೀಯವಾಗಿ ಕೈಗೊಳ್ಳಲಾಗಿದೆ. ಜ್ಞಾನೇಶ್ ಕುಮಾರ್ ಅವರು ಇನ್ನಿಬ್ಬರು ಆಯುಕ್ತರ ಅನುಮತಿ ಇಲ್ಲದೇ ತೀರ್ಮಾನ ತೆಗೆದುಕೊಳ್ಳಲಾಗಿದೆ. ಇಬ್ಬರು ಆಯುಕ್ತರ ವಿರೋಧದ ನಡುವೆಯೂ ಫಾರಂ 6 ಅನ್ನು ಮಾರ್ಪಾಡು ಮಾಡಲಾಗಿದೆ.

ರಾಹುಲ್ ಗಾಂಧಿ ಅವರು ಮತಗಳ್ಳತನ ವಿರುದ್ಧ ಧ್ವನಿ ಎತ್ತಿದಾಗ ಜ್ಞಾನೇಶ್ ಕುಮಾರ್ ಅವರು ರಾಹುಲ್ ಗಾಂಧಿ ದೇಶದ ಜನರ ಮುಂದೆ ಕ್ಷಮೆ ಕೋರಬೇಕು ಎಂದು ತಿಳಿಸಿದ್ದರು. ಈಗ ನಡೆದಿರುವ ಅಸಂವಿಧಾನಿಕ ತೀರ್ಮಾನಕ್ಕಾಗಿ ಜ್ಞಾನೇಶ್ ಕುಮಾರ್ ಅವರು ಕ್ಷಮೆಗೆ ಅರ್ಹರಲ್ಲ ಎಂದರು.

## ಸ್ಟಾಲಿನ್ ಸರ್ ಬಾಯಿ ಬಿಡಿ

### ಉದ್ಯಮಿ ವೀರಮಣಿ ಸೆಕ್ಸ್ ಹಗರಣ | ತಮಿಳುನಾಡು ಸಿಎಂ ವಿಜಯ್ ಒತ್ತಾಯ

**ಚೆನ್ನೈ:** ಉದ್ಯಮಿ ವೀರಮಣಿ ಸೆಕ್ಸ್ ಹಗರಣವನ್ನು ಉಲ್ಲೇಖಿಸಿ ಡಿಎಂಕೆ ಮುಖ್ಯಸ್ಥ ಮತ್ತು ಮಾಜಿ ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರು, "ಸ್ಟಾಲಿನ್ ಸರ್, ಮಾತನಾಡಿ" ಎಂದು ಆಗ್ರಹಿಸಿದ್ದಾರೆ.



ಹಲವು ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯದಂತಹ ಭಯಾನಕ ಪ್ರಕರಣದಲ್ಲೂ ಎಐಎಡಿಎಂಕೆ ಜೊತೆ, ಸ್ಟಾಲಿನ್ ಶಾಮೀಲಾಗಿದ್ದಾರೆ ಎಂದು ವಿಜಯ್ ಗಂಭೀರ ಆರೋಪ ಮಾಡಿದ್ದಾರೆ.

ಹಲವು ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಚೆನ್ನೈ ಮೂಲದ ಗ್ರಾನೈಟ್ಸ್ ಉದ್ಯಮಿ ಹಾಗೂ ಜೆಮ್ ಗ್ರೂಪ್‌ನ ಅಧ್ಯಕ್ಷ ಆರ್. ವೀರಮಣಿಯನ್ನು ಪೋಕೊì(POCSO) ಪ್ರಕರಣದಲ್ಲಿ ಬಂಧಿಸಲಾಗಿದೆ.

ವೀರಮಣಿ ಸೆಕ್ಸ್ ಹಗರಣದ ಬಗ್ಗೆ ಹಿಂದಿನ ಡಿಎಂಕೆ ಆಡಳಿತದಲ್ಲಿ ದೂರು ದಾಖಲಾಗಿದ್ದರೂ, ಇಡೀ ಅಪರಾಧ ಮತ್ತು ಅದರ ಇತಿಹಾಸವನ್ನು ಹೂತುಹಾಕಲಾಯಿತು ಎಂದು ವಿಜಯ್ ಆರೋಪಿಸಿದ್ದಾರೆ.

"ಅಸಲಿಗೆಆಪ್ರಕರಣವೇನುಎಂದುತಮಿಳುನಾಡು ಪ್ರಶ್ನಿಸುತ್ತಿದೆ. ಸ್ಟಾಲಿನ್ ಅವರೇ, ಬಾಯಿ ಬಿಡಿ, ದನಿ ಎತ್ತಿ; ನಿಮ್ಮೊಂದಿಗೆ ಕೈಜೋಡಿಸಿರುವ ಎಐಎಡಿಎಂಕE(AIADMK) ಕೂಡ ಈ ಬಗ್ಗೆ ತುಟಿಬಿಚ್ಚುತ್ತಿಲ್ಲ. ಈ ವಿಷಯದಲ್ಲೂ ಒಳಒಪ್ಪಂದವಿದೆಯೇ? ಈ ವಿಚಾರದಲ್ಲೂ ಪರಸ್ಪರ ಹೊಂದಾಣಿಕೆ ಮಾಡಿಕೊಂಡು ನೀವು ಮೌನವಾಗಿಯೇ ಉಳಿಯುತ್ತೀರಾ?" ಎಂದು ವಿಜಯ್ ಪ್ರಶ್ನಿಸಿದ್ದಾರೆ.

ಎಐಎಡಿಎಂಕೆಯ ಕೆ. ಮರಗಥಂ ಕುಮಾರವೇಲ್ ಅವರ ರಾಜೀನಾಮೆಯಿಂದಾಗಿ ತೆರವಾದ ಸ್ಥಾನಕ್ಕೆ ಅಕ್ಟೋಬರ್ 6ರಂದು ನಡೆಯುವ ಉಪಚುನಾವಣೆಯ ಪ್ರಚಾರ ಸಭೆಯಲ್ಲಿ ಸಿಎಂ ವಿಜಯ್, ಮಾಜಿ ಸಿಎಂ ವಿರುದ್ಧ ವಾಗ್ದಾಳಿ ನಡೆಸಿದರು.

ವೀರಮಣಿ 2003 ಅಥವಾ ಅದಕ್ಕೂ ಮುಂಚೆಯೇ ಇನ್ನೂ ಅನೇಕ ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವುದು ಕೇಂದ್ರ ಅಪರಾಧ ವಿಭಾಗ(CCB)ದ ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಸಿಇಸಿ ಜ್ಞಾನೇಶ್ ಕುಮಾರ್ ಸ್ಪಷ್ಟನೆ ನೀಡಲಿ; ಚಿರಾಗ್

**ಪಾಟ್ನಾ:** ಸಾಂಸ್ಥಿಕ ಬಿಕ್ಕಟ್ಟಿನ ಸುಳಿಯಲ್ಲಿಸಿಲುಕಿರುವಚುನಾವಣಾ ಆಯೋಗ ತೀವ್ರ ರಾಜಕೀಯ ಒತ್ತಡವನ್ನು ಎದುರಿಸುತ್ತಿದೆ. ಪ್ರತಿಪಕ್ಷಗಳು ಮುಖ್ಯ ಚುನಾವಣಾ ಆಯುಕ್ತಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸುತ್ತಿವೆ. ಈ ಮಧ್ಯೆ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಅವರು, ಚುನಾವಣಾ ಆಯೋಗದೊಳಗಿನ ಆಂತರಿಕ ಅಸಮಾಧಾನದ ಕುರಿತಾದ ವರದಿಗಳಿಗೆ ತೆರೆ ಎಳೆಯುವಂತೆ, ಸಿಇಸಿ ಜ್ಞಾನೇಶ್ ಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.



"ಜನರ ವಿಶ್ವಾಸವೇ ಈ ವಿಷಯದ ಪ್ರಮುಖ ಅಂಶವಾಗಿದೆ. ಚುನಾವಣಾ ಆಯೋಗ ಅದರಲ್ಲೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ಪ್ರಸ್ತುತ ಎದುರಾಗಿರುವ ಎಲ್ಲಾ ಗೊಂದಲಗಳಿಗೆ ತೆರೆ ಎಳೆಯಬೇಕು. ಚುನಾವಣಾ ಆಯೋಗ ನಿಷ್ಪಕ್ಷಪಾತವಾಗಿದೆ ಎಂಬ ಭರವಸೆಯನ್ನು ದೇಶದ ಜನತೆಗೆ ನೀಡಬೇಕು" ಎಂದು ಚಿರಾಗ್ ಪಾಸ್ವಾನ್ ಆಗ್ರಹಿಸಿದ್ದಾರೆ.

"ಚುನಾವಣಾ ಆಯೋಗದ ವಿರುದ್ಧ ಇಂತಹ ಪ್ರಶ್ನೆಗಳು ಏಳುತ್ತಿರುವಾಗ, ಆಯೋಗವುಅದರಲ್ಲೂವಿಶೇಷವಾಗಿ ಮುಖ್ಯ ಚುನಾವಣಾ ಆಯುಕ್ತರು ತಮ್ಮ ನಿಲುವನ್ನು ದೃಢವಾಗಿ ಮಂಡಿಸುವುದು ಅವರ ಜವಾಬ್ದಾರಿ ಎಂದು ನಾನು ಭಾವಿಸುತ್ತೇನೆ. ವಿರೋಧ ಪಕ್ಷಗಳು ಏನು ಹೇಳುತ್ತವೆ ಎಂಬುದರ ಬಗ್ಗೆ ನನಗೆ ಚಿಂತೆಯಿಲ್ಲ. ಏಕೆಂದರೆ ರಾಜಕೀಯ ಮಾಡುವುದೇ ಅವರ ಕೆಲಸ" ಎಂದು ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಹೇಳಿದ್ದಾರೆ.

"ಚುನಾವಣಾಆಯೋಗವುಜನರವಿಶ್ವಾಸವನ್ನುಉಳಿಸಿಕೊಳ್ಳಬೇಕು. ಏಕೆಂದರೆ ಚುನಾವಣಾ ಪ್ರಕ್ರಿಯೆಯ ಬಗ್ಗೆಯೇ ಸಾರ್ವಜನಿಕರ ಮನಸ್ಸಿನಲ್ಲಿ ಅನುಮಾನಗಳು ಮೂಡಿದರೆ ಅದು ಸರಿಯಲ್ಲ. ಅಂತಹ ಸಂದರ್ಭದಲ್ಲಿ ಜನರ ಮನಸ್ಸಿನಲ್ಲಿ ಯಾವುದೇ ಅನುಮಾನಗಳು ಉಂಟಾಗದಂತೆ ಚುನಾವಣಾ ಆಯೋಗವು ತನ್ನ ನಿಲುವನ್ನು ದೃಢವಾಗಿ ಮಂಡಿಸಬೇಕು" ಎಂದು ಚಿರಾಗ್ ಪಾಸ್ವಾನ್ ಸಲಹೆ ನೀಡಿದರು.

## ಬಂಟ್ವಾಳದ ಅಬ್ದುಲ್ ರೆಹಮಾನ್ ಹತ್ಯೆ ಪ್ರಕರಣಕ್ಕೆ ಬಿಗ್ ಟ್ವಿಸ್ಟ್

**ಮಂಗಳೂರು:** ಬಂಟ್ವಾಳದ ಅಬ್ದುಲ್ ರೆಹಮಾನ್ ಹತ್ಯೆ ಪ್ರಕರಣ ಇದೀಗ ಸ್ಫೋಟಕ ತಿರುವು ಪಡೆದುಕೊಂಡಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್.ಎಸ್.ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ ಭಟ್ ಅವರಿಗೆ ಶುಕ್ರವಾರ ಪೊಲೀಸರು ನೋಟೀಸ್ ಜಾರಿ ಮಾಡಿದ್ದಾರೆ. ಕಳೆದ ವರ್ಷ ಮೇ 25 ರಂದು ಬಂಟ್ವಾಳದಲ್ಲಿ ಅಬ್ದುಲ್ ರಹಿಮಾನ್ ಹತ್ಯೆ ನಡೆದಿತ್ತು.



ಈ ಹತ್ಯೆ ವೇಳೆ ಆರೋಪಿಗಳ ಜೊತೆ ಕಲ್ಲಡ್ಕ ಪ್ರಭಾಕರ್ ಭಟ್ ಅವರು ನಿರಂತರ ಫೋನ್ ಸಂಪರ್ಕದಲ್ಲಿದ್ದರು ಎಂಬ ಮಾಹಿತಿ ಹಿನ್ನೆಲೆಯಲ್ಲಿ ಬಂಟ್ವಾಳ ಗ್ರಾಮಾಂತರ ಠಾಣೆ ಪೊಲೀಸರು ಇಂದು ಅವರಿಗೆ ನೋಟಿಸ್ ಜಾರಿ ಮಾಡಿದ್ದಾರೆ.

ಕಲ್ಲಡ್ಕ ಪ್ರಭಾಕರ ಭಟ್ ಅವರಿಗೆ ನೋಟಿಸ್ ನೀಡಿರುವ ಪೊಲೀಸರು, ನಾಳೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದಾರೆ. ಪೊಲೀಸರ ಈ ಕ್ರಮಕ್ಕೆ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಇದರ ಹಿಂದೆ ವ್ಯವಸ್ಥಿತ ಸಂಚು ಎಂದು ಆರೋಪಿಸಿವೆ.

**ವಿಎಚ್ ಪಿ ಕೆಂಡಾಮಂಡಲ:** ಅಬ್ದುಲ್ ರೆಹಮಾನ್ ಹತ್ಯೆಗೂ ಕಲ್ಲಡ್ಕ ಪ್ರಭಾಕರ್ ಭಟ್‌ಗೆ ಏನು ಸಂಬಂಧ? ಕಾಂಗ್ರೆಸ್ ರಾಜಕೀಯ ಪ್ರೇರಿತವಾಗಿ ಹಿಂದೂ ಸಂಘಟನೆಯನ್ನು ಟಾರ್ಗೆಟ್ ಮಾಡುತ್ತಿದೆ ಎಂದು ವಿಹೆಚ್‌ಪಿ ಮುಖಂಡ ಶರಣ್ ಪಂಪ್ ವೆಲ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿಚಾರಣೆ ನೆಪದಲ್ಲಿ ಪ್ರಭಾಕರ ಭಟ್ ಅವರನ್ನ ಬಂಧಿಸುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದ ಪಂಪ್ ವೆಲ್, ಎರಡು ಚಾರ್ಜ್‌ಶೀಟ್ ಆದ ಪ್ರಕರಣದಲ್ಲಿ ವಿಚಾರಣೆ ಅಗತ್ಯ ಏನಿದೆ? ಎಂದು ಪ್ರಶ್ನಿಸಿದ್ದಾರೆ.

ಬಿ.ಸಿ.ರೋಡ್ ಚಲೋ ಹಮ್ಮಿಕೊಂಡ ಬೆನ್ನಲ್ಲೇ ಈ ನೋಟಿಸ್ ನೀಡಲಾಗಿದೆ. ಇದು ಹಿಂದೂಗಳ ಧ್ವನಿಯನ್ನು ಅಡಗಿಸುವಂತಹ ಪ್ರಯತ್ನ. ಕಲ್ಲಡ್ಕ ಪ್ರಭಾಕರ ಭಟ್‌ಗೆ ಕೊಟ್ಟ ನೋಟಿಸ್ ಹಿಂಪಡೆಯಿರಿ. ಇಲ್ಲದಿದ್ರೆ ಹಿಂದೂ ಕಾರ್ಯಕರ್ತರು ಬೀದಿಗಿಳಿಯುತ್ತಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಆಸ್ತಿ ವಿಚಾರವಾಗಿ ತಾಯಿ ಮತ್ತು ಮಗನ ಬರ್ಬರ ಹತ್ಯೆ

**ಹಾವೇರಿ:** ಆಸ್ತಿ ವಿಚಾರವಾಗಿ ತಾಯಿ ಮತ್ತು ಮಗನನ್ನು ಮಾರಕಾಸ್ತ್ರಗಳಿಂದ ದಾಳಿ ನಡೆಸಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಹಾನಗಲ್ ತಾಲೂಕಿನ ಕುಸನೂರು ಗ್ರಾಮದಲ್ಲಿ ನಡೆದಿದೆ. ಮೃತರನ್ನು 55 ವರ್ಷದ ಪ್ರೇಮಕ್ಕ ಬಡಿಗೇರ ಹಾಗೂ ಪುತ್ರ 38 ವರ್ಷದ ಅವಿನಾಶ್ ಬಡಿಗೇರ ಎಂದು ಗುರುತಿಸಲಾಗಿದೆ. ಆಡೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಪ್ರೇಮಕ್ಕ ಬಡಿಗೇರ ಕೆಲವು ವರ್ಷಗಳ ಹಿಂದೆ ಆಸ್ತಿಯನ್ನು ಖರೀದಿ ಮಾಡಿದ್ದರು. ಆದರೆ ಆಸ್ತಿಯನ್ನು ಪ್ರೇಮಕ್ಕ ಹೆಸರಿಗೆ ವರ್ಗಾವಣೆ ಮಾಡಿರಲಿಲ್ಲ. ಈ ಸಂಬಂಧ ಕಾನೂನು ಹೋರಾಟ ನಡೆಸಿ ಕೋರ್ಟ್ ಮೂಲಕ ಆಸ್ತಿಯನ್ನು ಮರಳಿ ತಮ್ಮ ವಶಕ್ಕೆ ಪಡೆದು–ಕೊಂಡಿದ್ದರು. ಇದರಿಂದ ರೊಚ್ಚಿಗೆದ್ದ ತಿರಕಯ್ಯ ಹೊಸಮಠ ಹಾಗೂ ಬಸವರಾಜ ಹೊಸಮಠ ಎಂಬುವವರು ಕೊಲೆ ಮಾಡಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಆಡೂರು ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

## ಐಷಾರಾಮಿ ಜೀವನಕ್ಕೆ ಕಳ್ಳತನ

**ಬೆಂಗಳೂರು:** ವಿಲ್ಸನ್ ಗಾರ್ಡನ್ ಠಾಣೆ ಪೊಲೀಸರು ಇತ್ತೀಚೆಗೆ ಬಂಧಿಸಿರುವ ಹೈಟೆಕ್ ಕಳ್ಳ ನೆನಾವತ್ ವಿನೋದ್ ಕುಮಾರ್ ಅಲಿಯಾಸ್ ಮೊಹಮದ್ ಬಷೀರ್ (32) ನ ಬಾಂಗ್ಲಾದೇಶದ ಪ್ರೇಮ್ ಕಹಾನಿ ತನಿಖೆಯಲ್ಲಿ ಬಯಲಾಗಿದೆ. ಜತೆಗೆ, ಕಳ್ಳತನ ಮಾಡಿಯೇ ಪತ್ನಿಯ ಜತೆ ಐಷಾರಾಮಿ ಜೀವನ ನಡೆಸುತ್ತಿದ್ದ ಕುತೂಹಲಕಾರಿ ಸಂಗತಿಯೂ ಹೊರಬಿದ್ದಿದೆ. ತೆಲಂಗಾಣದ ಕೆ.ವಿ. ರಂಗಾರೆಡ್ಡಿ ಜಿಲ್ಲೆಯ ವಿನೋದ್ ಕುಮಾರ್, ಬಿ.ಟೆಕ್ ವ್ಯಾಸಂಗವನ್ನು ಅರ್ಧಕ್ಕೆ ತೊರೆದು ಕಳ್ಳತನವನ್ನೆ ಉದ್ಯೋಗ ಮಾಡಿಕೊಂಡಿದ್ದ. ಹೈದರಾಬಾದ್‌ನಲ್ಲಿ ಜೈಲು ವಾಸವನ್ನೂ ಅನುಭವಿಸಿದ್ದ ಪರಿಣಾಮ 29 ಕೇಸ್‌ಗಳ ಕುಖ್ಯಾತಿ ಹೊಂದಿದ್ದ.

### ಬೆಳೆ ವಿಮೆ ಸಮೀಕ್ಷೆ ವೇಳೆ ವಿಮಾ ಕಂಪನಿ ಸಿಬ್ಬಂದಿ | ರೈತರ ನಡುವೆ ವಾಗ್ವಾದ

# ನೀರಾವರಿ ಬೆಳೆಗಳಿಗೆ ಜಿಪಿಎಸ್: ರೈತರ ಆಕ್ರೋಶ

**ಸಮಾಲೋಚನೆ ಸುದ್ದಿ ರಾಣೇಬೆನ್ನೂರು**

ತಾಲೂಕಿನಲ್ಲಿ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ರೈತರಿಗೆ ಬೆಳೆ ವಿಮೆ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ವಿಮಾ ಕಂಪನಿಗಳ ಸಿಬ್ಬಂದಿ ಹಾಗೂ ಗ್ರಾಪಂ ಸಿಬ್ಬಂದಿಗಳು ಜಿಪಿಎಸ್ ಆಧಾರಿತ ಬೆಳೆ ಸಮೀಕ್ಷೆ ನಡೆಸುತ್ತಿರುವ ವೇಳೆ, ನೀರಾವರಿ ಪ್ರದೇಶದಲ್ಲಿ ಬೆಳೆದ ಬೆಳೆಗಳನ್ನೂ ಜಿಪಿಎಸ್ ಮಾಡುತ್ತಿರುವುದಕ್ಕೆ ರೈತರು ಆಕ್ಷೇಪ ವ್ಯಕ್ತಪಡಿಸಿ ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸಿದ ಘಟನೆ ತಾಲೂಕಿನ ಯತ್ನಳಿ ಗ್ರಾಮದಲ್ಲಿ ಶುಕ್ರವಾರ ನಡೆದಿದೆ.

ಬರಗಾಲದ ಹಿನ್ನೆಲೆಯಲ್ಲಿ ಮಳೆಯಾಶ್ರಿತ ಬೆಳೆಗಳು ಹಾನಿಗೊಳಗಾಗಿರುವ ಸಂದರ್ಭದಲ್ಲಿ ಬೆಳೆ ವಿಮೆ ಪರಿಹಾರ ಪಡೆಯಲು ರೈತರು ನಿರೀಕ್ಷಿಸುತ್ತಿದ್ದಾರೆ. ಆದರೆ, ನೀರಾವರಿ ಸೌಲಭ್ಯ ಹೊಂದಿರುವ ಪ್ರದೇಶಗಳಲ್ಲಿ ಉತ್ತಮವಾಗಿ ಬೆಳೆದಿರುವ ಬೆಳೆಗಳನ್ನು ಜಿಪಿಎಸ್ ಮೂಲಕ ದಾಖಲಿಸಿ, ಅವುಗಳನ್ನು ಉತ್ತಮ ಬೆಳೆ ಎಂದು ತೋರಿಸುವ ಮೂಲಕ ಬೆಳೆ ವಿಮೆ ಸಮೀಕ್ಷೆಯ ವರದಿಯಲ್ಲಿ ವ್ಯತ್ಯಾಸ ಉಂಟಾಗುವ ಸಾಧ್ಯತೆ ಇದೆ ಎಂದು ರೈತರು ಆರೋಪಿಸಿದ್ದಾರೆ.

ಬರ ಪರಿಸ್ಥಿತಿಯಿಂದ ಮಳೆಯಾಶ್ರಿತ ರೈತರು ಸಂಕಷ್ಟದಲ್ಲಿದ್ದು, ಇಂತಹ ಸಂದರ್ಭದಲ್ಲಿ ನೀರಾವರಿ ಪ್ರದೇಶದ ಉತ್ತಮ ಬೆಳೆಗಳನ್ನು ಸಮೀಕ್ಷೆಗೆ



ಒಳಪಡಿಸುವುದು ಸರಿಯಲ್ಲ. ಇದರಿಂದ ನಿಜವಾದ ಬೆಳೆಹಾನಿ ಅನುಭವಿಸಿರುವ ರೈತರಿಗೆ ಅನ್ಯಾಯವಾಗುವ ಲಕ್ಷಣ ಕಂಡು ಬರುತ್ತದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳೆ ವಿಮೆ ಸಮೀಕ್ಷೆ ಪಾರದರ್ಶಕವಾಗಿ ನಡೆಯಬೇಕು. ಜಿಪಿಎಸ್ ಸಮೀಕ್ಷೆಯ ಸಂದರ್ಭದಲ್ಲಿ ನೀರಾವರಿ ಮತ್ತು ಮಳೆಯಾಶ್ರಿತ ಪ್ರದೇಶಗಳನ್ನು ಪ್ರತ್ಯೇಕವಾಗಿ ಗುರುತಿಸಿ, ನೈಜ ಬೆಳೆ ಪರಿಸ್ಥಿತಿಯನ್ನು ದಾಖಲಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಘಟನೆಯ ಕುರಿತು ಸಂಬಂಧಪಟ್ಟ ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾಡಳಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಜಿಪಿಎಸ್ ಸಮೀಕ್ಷೆಯ ಉದ್ದೇಶ, ದಾಖಲಾಗುತ್ತಿರುವ ಬೆಳೆಗಳ ವಿವರ ಹಾಗೂ ವಿಮಾ ಕಂಪನಿ ಸಿಬ್ಬಂದಿಯ ಕಾರ್ಯವಿಧಾನದ ಬಗ್ಗೆ ಸ್ಪಷ್ಟತೆ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.ಸ್ಥಳಕ್ಕೆ ಆಗಮಿಸಿದ ಪೊಲಿಸರು ರೈತರನ್ನು ತಿಳಿಗೊಳಿಸಿ ನಂತರ ವಿಮಾ ಸಿಬ್ಬಂದಿ ಜತೆ ಸಮಸ್ಯೆ ಚರ್ಚಿಸಿ ಸರಿದೂಗಿಸಿದರು. ಈ ಸಮಯದಲ್ಲಿ ರೈತರಾದ ಶಂಭುಲಿಂಗಪ್ಪ ಕುರವತ್ತಿ, ಮಹೇಶ ಗುಜಲರ, ಗಿರೀಶ್ ಸೋಮರೆಡ್ಡಿ, ಪ್ರತಾಪ್ ಸೋಮರೆಡ್ಡಿ, ಸತೀಶ ಬೆಳವಿಗೆ, ಬಸವರಾಜ ಪುರದ ಸೇರಿದಂತೆ ಮತ್ತಿತರಿದ್ದರು.

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

# ಕರ್ನಾಟಕ ಜಾನಪದ ವಿವಿಯಲ್ಲಿ ರದ್ದುಪಡಿಸಿದ ಎಂಟು ಕೋರ್ಸ್‌ಗಳು ಮುಚ್ಚದೇ ಮುಂದುವರೆಸುವಂತೆ ಆಗ್ರಹಿಸಿ ಎಸ್‌ಎಫ್‌ಐ ಮನವಿ

**ಹಾವೇರಿ:** ಶಿಗ್ಗಾಂವಿ ತಾಲ್ಲೂಕಿನ ಗೊಟ್ಟಗೋಡಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಎದುರು ಸರದಿ ಅನಿರ್ದಿಷ್ಟಾವಧಿ ಉಪವಾಸ ನಿರತ ಅತಿಥಿ ಉಪನ್ಯಾಸಕರು ಹೋರಾಟವನ್ನು ಬೆಂಬಲಿಸಿ ಹಾಗೂ ವಿವಿಯ 8 ಕೋರ್ಸುಗಳನ್ನು ರದ್ದುಪಡಿಸಿದನ್ನು ವಿರೋಧಿಸಿ, ಪುನಃ ಮುಂದುವರೆಸುವಂತೆ ಒತ್ತಾಯಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಹಾವೇರಿ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷ ಅರುಣ್ ಕುಮಾರ್ ನಗವತ್ ಮಾತನಾಡಿ, ಜಗತ್ತಿನ ಏಕೈಕ ಜಾನಪದ ವಿಶ್ವವಿದ್ಯಾಲಯವನ್ನು ಅಭಿವೃದ್ಧಿ ಮಾಡಬೇಕಾದ ಅಧಿಕಾರಿಗಳೇ ನಾಶ ಮಾಡಲು ಮುಂದಾಗಿರುವುದು ಖಂಡನೀಯ. ಏಕಾಏಕಿ 8 ಕೋರ್ಸುಗಳನ್ನು ರದ್ದು ಮಾಡುವುದು ಎಷ್ಟರಮಟ್ಟಿಗೆ ಸರಿಯಾಗಿದೆ. ಇದಕ್ಕೆಲ್ಲ ಯಾರು ಹೊಣೆ? ಸಂಬಂಧಿಸಿದ ಆಡಳಿತ ಮಂಡಳಿಯ ಕಾರ್ಯವೈಖರಿ ವಿಫಲವಾಗಿವೆ. ರಾಜ್ಯ ಸರ್ಕಾರದ ಯಾವುದೇ ಅಧಿಕಾರಿಗಳು ಈತ ಗಮನಾರ್ಹ ನೀಡದೆ. ಅಭಿವೃದ್ಧಿ ಕುಂಠಿತವಾಗಿದೆ.

ವಿವಿ ಅಡಳಿತ ಮಂಡಳಿ ಲೋಪದೋಷಗಳಿಂದ ಅಭಿವೃದ್ಧಿ ಬದಲಾಗಿ ಅನೈತಿಕ, ಅಕ್ರಮ ಚಟುವಟಿಕೆಗಳು, ಭ್ರಷ್ಟಾಚಾರ ತಾಂಡವಾಡುತ್ತಿವೆ. 9 ದಿವಸಗಳ ಕಾಲ ಉಪವಾಸ ಧರಣಿ ನಿರತ ಅತಿಥಿ ಉಪನ್ಯಾಸಕರನ್ನು ವೇತನ ಕೊಡದೇ ಬಾಕಿ ಉಳಿಸಿಕೊಂಡು, ಏಕಾಏಕಿ ಕೆಲಸದಿಂದ ಬಿಡುಗಡೆ ಮಾಡಿ ಬೀದಿಗೆ ತಳ್ಳಿರುವ ಜಾನಪದ ವಿವಿ ಆಡಳಿತ ಮಂಡಳಿ ನಾಚಿಕೆಗೇಡಿನ ಸಂಗತಿಯಾಗಿದೆ. ಈ ಕೂಡಲೇ ರಾಜ್ಯ ಸರ್ಕಾರ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಮಧ್ಯೆ ಪ್ರವೇಶ ಮಾಡಬೇಕೆಂದು ಆಗ್ರಹಿಸಿದರು.

ಎಸ್‌ಎಫ್‌ಐ ತಾಲ್ಲೂಕ್ ಅಧ್ಯಕ್ಷ ದ್ಯಾಮಣ್ಣ ಅರೆರ್ ಮಾತನಾಡಿ, ಜಾನಪದ ವಿಶ್ವವಿದ್ಯಾಲಯವು ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ಧಾರೆಳೆದ ವಿವಿ ಅಭಿವೃದ್ಧಿ ಕಾಣದೆ ಒಂದಾಲೊಂದು ಸಮಸ್ಯೆಗಳ ಮಧ್ಯೆ ನರಳಾಡುತ್ತಿದೆ. ವಿದ್ಯಾರ್ಥಿಗಳು ದಾಖಲಾತಿ, ಪ್ರವೇಶ ಶುಲ್ಕ, ಅಂಕಪಟ್ಟಿ, ಪರೀಕ್ಷಾ ಶುಲ್ಕ, ಬಸ್ಸಿನ ಸಮಸ್ಯೆಗಳು, ಹಾಸ್ಟೆಲ್ ಸಮಸ್ಯೆಗಳು, ಅತಿಥಿ ಉಪನ್ಯಾಸಕರ ನೇಮಕಾತಿ, ವೇತನ ಹೀಗೆ ಅನೇಕ ಸಮಸ್ಯೆಗಳು ಗೂಡಾಗಿದ್ದ ವಿವಿಯು ಸಮಸ್ಯೆಗಳ ಪರಿಹಾರಕ್ಕಾಗಿ, ಅಭಿವೃದ್ಧಿಗಾಗಿ ಚಿಂತನೆ ನಡೆಸಬೇಕಾದ ರಾಜ್ಯ ಸರ್ಕಾರವು ಪ್ರಸ್ತುತ ವರ್ಷ ಎಂಟು ಕೋರ್ಸ್ ಗಳು ಮುಚ್ಚುತ್ತಿರುವ ಬೆಳವಣಿಗೆಯನ್ನು ಎಸ್‌ಎಫ್‌ಐ ಸಂಘಟನೆ ತೀವ್ರವಾಗಿ ಖಂಡಿಸುತ್ತಿವೆ.

ರಾಜ್ಯ ಸರಕಾರ ಕೂಡಲೇ ಮಧ್ಯೆ ಪ್ರವೇಶಿಸಿ, ಎಂಟು ಕೋರ್ಸ್ ಗಳನ್ನು ಮುಚ್ಚದೇ ಮುಂದುವರೆಸಬೇಕು. ಜಾನಪದ ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಸೇರಿದಂತೆ ಎಲ್ಲ ಸಮಸ್ಯೆಗಳನ್ನು ಪರಿಹರಿಸಬೇಕು ಹಾಗೂ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು.

ಅತಿಥಿ ಉಪನ್ಯಾಸಕರನ್ನು ಅನೇಕ ವರ್ಷಗಳಿಂದ ಅತಿಥಿಗಳಾಗಿ ನೇಮಕ ಮಾಡಿಕೊಂಡು ಈಗ ಧಿಡೀರ್ ಅಂತಾ ಯಾವುದೇ ನೋಟೀಸ್ ನೀಡದೆ ಬಿಡುಗಡೆ ಮಾಡುವುದು ಸರಿಯಲ್ಲ. ಕೂಡಲೇ ಅತಿಥಿ ಉಪನ್ಯಾಸಕರನ್ನು ವಾರ್ಷಿಕ ಅವಧಿ ಮುಗಿಯುವವರೆಗೂ ಮುಂದವರೆಸಬೇಕು. ಬಾಕಿ ಉಳಿಸಿಕೊಂಡು ವೇತನವನ್ನು ಬಿಡುಗಡೆ ಮಾಡುವುದು ಸೇರಿದಂತೆ ಸರದಿ ಉಪವಾಸ ಧರಣಿ ನಿರತರಾಗಿದ್ದ ಅತಿಥಿ ಉಪನ್ಯಾಸಕರ ಬೇಡಿಕೆಗಳನ್ನು ಈಡೇರಿಸಲು ಆಡಳಿತ ಮಂಡಳಿ ಹಾಗೂ ರಾಜ್ಯ ಉನ್ನತ ಶಿಕ್ಷಣ ಇಲಾಖೆ ಮುಂದಾಗಬೇಕೆಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅನೇಕ ವಿದ್ಯಾರ್ಥಿಗಳುಲೋಕೇಶ್ ಎಮ್, ನಂದೀಶ್ ಕೆ, ಚಂದು ಲಮಾಣಿ, ಚಿದಾನಂದ ಎಲ್, ಅರ್ಜುನ್ ಮಲ್ಲಣ್ಣನವರ, ಭೀಮಣ್ಣ ಬಿ, ಮದನ ಕುಮಾರ್, ಶರಣಪ್ಪ ಎಸ್, ಶೇಕೆಪ್ಪ ದೊಡ್ಡಮನಿ, ಗಣೇಶ ಹರಿಜನ, ಆಕಾಶ ಪೂಜಾರ, ಪ್ರದೀಪ್ ಎಸ್, ಕಿರಣ್ ಲಮಾಣಿ, ಮನೋಜ್ ಹರಿಜನ ಉಪಸ್ತಿತರಿದ್ದರು.



# ಕಾಯಕ, ದಾಸೋಹದ ಹರಿಕಾರ ಬಸವಣ್ಣ

**ಸಮಾಲೋಚನೆ ಸುದ್ದಿ ಹಾವೇರಿ**

ಬಸವಣ್ಣನವರ ಸಮಗ್ರ ಸಮಾನತೆ ಹಾಗೂ ಏಕತೆಯ ತತ್ವಗಳು ವಿಶ್ವಕಂಡ ಅತ್ಯಂತ ಶ್ರೇಷ್ಠ ವಿಸ್ಮಯವಾಗಿದೆ ಎಂದು ಮಡಿಕೇರಿ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅಶೋಕ ಆಲೂರ ಹೇಳಿದರು.

ನಗರದ ಸಿಂದಗಿಮಠದಲ್ಲಿ ಬಸವ ಬಳಗದಿಂದ ಇತ್ತೀಚೆಗೆ ಆಯೋಜಿಸಿದ್ದ ಮನೆಯಲ್ಲಿ ಮಹಾಮನೆ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಬಸವಣ್ಣನವರು ಸರ್ವ ಜನಾಂಗ ಹಾಗೂ ಎಲ್ಲ ಕಾಯಕ ಮೂಲದವರನ್ನು ಸಂಘಟಿಸಿ ಒಂದೇ ಸೂರಿನಡಿ ತಂದ ಬೀಜ ಮಂತ್ರವಾಗಿ ಸಮಾನತೆ, ಕಾಯಕ ಹಾಗೂ ದಾಸೋಹದ ಹರಿಕಾರರಾಗಿದ್ದಾರೆ. ಕಾಯಕ ಜ್ಞಾನ ಮತ್ತು ಕ್ರಿಯೆಗಳ ಸಂಗಮವಾಗಿ ಐಚ್ಛಿಕವಾಗಿ ಹಾಗೂ ತಾರತಮ್ಯವಾಗಿ ಇರಬೇಕೆಂಬುದೇ ಅವರ ಧ್ಯೇಯವಾಗಿತ್ತು. ದಾನ ಸಂಸ್ಕೃತಿ ಬದಲಾಗಿ ನಿರಹಂ ಭಾವದ ದಾಸೋಹ ಸಂಸ್ಕೃತಿಯನ್ನು ನೀಡಿ ಸತ್ಯ ಶುದ್ಧ ಕಾಯಕದಿಂದ ಬಂದ ಅರ್ಥವನ್ನು ತನು,ಮನ, ಭಾವದಿಂದ ಗುರು,ಲಿಂಗ, ಜಂಗಮಕ್ಕೆ ಸಮರ್ಪಿಸುವ ಸಂಕಲ್ಪ ನೀಡಿದರು. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ಶರಣರು ಎಂದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಭುಗೌಡ ಬಿಷ್ಟನಗೌಡ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ದಾವಣಗೆರೆ ವಿರಕ್ತಮಠದ ಬಸವ ಪ್ರಭು ಸ್ವಾಮೀಜಿ, ಹೋತನಹಳ್ಳಿಯ ಶಂಭುಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಹಾವೇರಿ ವಿಶ್ವ ವಿದ್ಯಾಲಯದ ಉಪಕುಲಪತಿ ಸುರೇಶ ಜಂಗಮಶೆಟ್ಟಿ, ಬಸವ ಬಳಗದ ಅಧ್ಯಕ್ಷ ವಿ.ಜಿ. ಯಳಗೇರಿ, ಶಿವಬಸಪ್ಪ ಮುದ್ದಿ, ಮಲ್ಲಿಕಾರ್ಜುನ ಹಿಂಚಿಗೇರಿ, ಮುರಿಗೆಪ್ಪ ಕಡೆಕೊಪ್ಪ, ಉಳಿವೆಪ್ಪ ಪಂಪಣ್ಣವರ, ಶಿವಯೋಗಿ ಬೆನ್ನೂರ, ಶಿವಯೋಗಿ ಮಾಮಲೆ ಪಟ್ಟಣಶೆಟ್ಟಿ, ಬಿ. ಚನ್ನವೀರಪ್ಪ, ಬಸವರಾಜ ಮುಳಗುಂದ, ಚಂದ್ರಶೇಖರ ಮಾಳಗಿ, ಕೆ.ಎಂ. ವಿಜಾಪುರ, ಚನ್ನಬಸವಣ್ಣ ರೊಡ್ಡನವರ, ಮಲ್ಲಿಕಾರ್ಜುನ ಸಾತೇನಹಳ್ಳಿ ಮತ್ತಿತರರು ಉಪಸ್ಥಿತರಿದ್ದರು.



# ಆತ್ಮಾರ್ಪಣ ಸಮುದಾಯ ಸಮರ್ಪಣಾ ಸಮಾರಂಭ ಇಂದು

**ಹಾವೇರಿ:** ಇಲ್ಲಿಯ ಹೊಸಮಠದ ಬಸವ ಕೇಂದ್ರ ಹಾಗೂ ಅರಳಿಕಟ್ಟಿ ಪ್ರಕಾಶನ ವತಿಯಿಂದ ಅರಳಿಕಟ್ಟಿ ಗೂಳಪ್ಪ ಅವರ 2ನೇ ಕೃತಿ ಆತ್ಮಾರ್ಪಣ ಸಮುದಾಯ ಸಮರ್ಪಣಾ ಸಮಾರಂಭ ಸೆ. 26ರಂದು ಸಂಜೆ 6.30ಕ್ಕೆ ನಗರದ ಹೊಸಮಠದ ಆವರಣದಲ್ಲಿ ಜರುಗಲಿದೆ.

ಹೊಸಮಠದ ಬಸವ ಶಾಂತಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಹುತಾತ್ಮ ಮೈಲಾರ ಮಹಾದೇವಪ್ಪನವರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಅಧ್ಯಕ್ಷತೆ ವಹಿಸುವರು. ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಮುಖಂಡ ಆನಂದಸ್ವಾಮಿ ಗಡ್ಡದ್ದೇವರಮಠ ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಕೃತಿ ಸಮುದಾಯ ಸಮರ್ಪಣೆ ಹಾಗೂ ಹಿರಿಯ ಸಾಹಿತಿ ಡಾ. ಸತೀಶ ಕುಲಕರ್ಣಿ ಆತ್ಮಾರ್ಪಣ ಅವಲೋಕನ ಮಾಡುವರು.

ಕರ್ನಾಟಕ ರಾಜ್ಯ ಸ್ವಾತಂತ್ರ್ಯ ಹೋರಾಟಗಾರರ ಹಾಗೂ ಉತ್ತರಾಧಿಕಾರಿಗಳ ಸಂಘದ ಅಧ್ಯಕ್ಷ ಜಗದೀಶ ಮಹಾರಾಜಪೇಟ, ಸ್ವಾತಂತ್ರ್ಯ ಹೋರಾಟಗಾರರಾದ ರಮಾನಂದ ಹಾಗೂ ದೇವಕ್ಕ ಮನ್ನಂಗಿ ಅವರ ಪುತ್ರಿ ಗಿರಿಜಮ್ಮ ಸೂರಣಗಿ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಗ್ರಂಥಾಲಯಗಳ ಅನುಷ್ಠಾನ ನಾಳೆ

ಹಾವೇರಿ: ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತಿ ಸಮಿತಿ ಆಶ್ರಯದಲ್ಲಿ ಸೆ. 27ರಂದು 4 ಗ್ರಂಥಾಲಯಗಳು ನಗರದಲ್ಲಿ ಅನುಷ್ಠಾನಗೊಳ್ಳಲಿವೆ.

ಅಂದು ಬೆಳಗ್ಗೆ 10.30ಕ್ಕೆ ಡಾ. ಶಮಂತಕುಮಾರ ಕೆ.ಎಸ್ (ಹೆಗ್ಗೇರಿ ದವಾಖಾನೆ ಹತ್ತಿರ)ದ ಮನೆಯಲ್ಲಿನ ಗ್ರಂಥಾಲಯವನ್ನು ಡಾ. ಮಹಾದೇವಿ ಕಣವಿ ಉದ್ಘಾಟಿಸುವರು. ಕಸಾಪ ಜಿಲ್ಲಾ ಮಾಜಿ ಅಧ್ಯಕ್ಷ ಎಸ್.ವೈ. ಗುಬ್ಬಣ್ಣನವರ ಅಧ್ಯಕ್ಷತೆ ವಹಿಸುವರು. ಮಧ್ಯಾಹ್ನ 12 ಗಂಟೆಗೆ ಸಾಹಿತಿ ಶಿಕ್ಷಕ ಜಿ.ಎಂ. ಓಂಕಾರಣ್ಣನವರ ಮನೆಯಲ್ಲಿ (ಶಿವಯೋಗೇಶ್ವರ ನಗರ) ಶೋಭಾ ಜಾಗಟಗೇರಿ ಉದ್ಘಾಟಿಸುವರು. ಕರುನಾಡ ಕನ್ನಡ ಸಾಂಸ್ಕೃತಿಕ ಬಳಗದ ಅಧ್ಯಕ್ಷ ಎಸ್.ಪಿ. ಮೂಡೆಣ್ಣನವರ ಅಧ್ಯಕ್ಷತೆ ವಹಿಸುವರು. ಸಂಜೆ 4 ಗಂಟೆಗೆ ಸಾಮಾಜಿಕ ಕಾರ್ಯಕರ್ತ ನಿಂಗಪ್ಪ ಗಾಳೆಮ್ಮನವರ (ರಾಜೇಂದ್ರನಗರದ) ಅವರ ಮನೆಯಲ್ಲಿ ಅಂಕಣಕಾರ ವಾಗೀಶ ಹೂಗಾರ ಉದ್ಘಾಟಿಸುವರು. ಬಾಬುಸಾಬ ಮೋಮಿನ್‌ಗಾರ ಅಧ್ಯಕ್ಷತೆ ವಹಿಸುವರು. ಸಂಜೆ 6 ಗಂಟೆಗೆ ಹಿರಿಯ ಲೇಖಕಿ (ಬಸವೇಶ್ವರ ನಗರ 2ನೇ ಕ್ರಾಸ್)ನಲ್ಲಿ ನಿವೃತ್ತ ಇಂಜಿನಿಯರ್ ಸಿ.ಎಚ್. ಬಾರ್ಕಿ ಉದ್ಘಾಟಿಸುವರು. ವಿ.ಎಂ. ಪತ್ರಿ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ ಮುಂದೂಡಿಕೆ

**ಹಾವೇರಿ:** ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆಯನ್ನು ಸೆ.28ರಂದು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ (ಎಂ.ಎಲ್.ಸಿ) ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಾಗಿರುವ ಹಿನ್ನೆಲೆಯಲ್ಲಿ ಸದರಿ ಸಭೆಯನ್ನು ಮುಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಂಧಿ ಜಯಂತಿ: ಪ್ರಯಾಣಿಕರ ಅನುಕೂಲಕ್ಕಾಗಿ 120 ವಿಶೇಷ ಬಸ್‌ಗಳ ಕಾರ್ಯಾಚರಣೆ

ಹಾವೇರಿ, ಸೆ.25: (ಕರ್ನಾಟಕ ವಾರ್ತೆ) ಗಾಂಧಿ ಜಯಂತಿ ಹಾಗೂ ಸಾಲು ರಜೆಗಳ ಹಿನ್ನೆಲೆಯಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (ಕೆಎಸ್‌ಆರ್‌ಟಿಸಿ) ಹುಬ್ಬಳ್ಳಿ ವಿಭಾಗ ಸೇರಿದಂತೆ ವಿವಿಧ ವಿಭಾಗಗಳಿಂದ ಸುಮಾರು 120 ವಿಶೇಷ ಬಸ್‌ಗಳನ್ನು ಕಾರ್ಯಾಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಗಾಂಧಿ ಜಯಂತಿ ಅಂಗವಾಗಿ ಅ.1ರಂದು ಗುರುವಾರ, ಅ.2ರಂದು ಶುಕ್ರವಾರ, ಅ.3ರಂದು ಶನಿವಾರ ಹಾಗೂ ಅ.4ರಂದು ಭಾನುವಾರ ಸಾಲು ರಜೆಗಳು ಇರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ಹಾಗೂ ವಿವಿಧ ಸ್ಥಳಗಳಿಗೆ ತೆರಳುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ಪ್ರಯಾಣಿಕರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ.

ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಹಾಗೂ ಬಾಗಲಕೋಟೆ ವಿಭಾಗಗಳಿಂದ ಸುಮಾರು 120 ವಿಶೇಷ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ. ಬೆಂಗಳೂರಿನಿಂದ ರಾಜ್ಯದ ವಿವಿಧ ಸ್ಥಳಗಳಿಗೆ ಹಾಗೂ ಅಂತರರಾಜ್ಯ ಮಾರ್ಗಗಳಲ್ಲಿ ತೆರಳುವ ಪ್ರಯಾಣಿಕರ ಅನುಕೂಲಕ್ಕಾಗಿ ಅ.1 ಮತ್ತು ಅ.2ರಂದು ವಿಶೇಷ ಸಾರಿಗೆ ಸೇವೆ ಕಲ್ಪಿಸಲಾಗುತ್ತದೆ.

ಸದರಿಯ ವಿಶೇಷ ಬಸ್‌ಗಳ ಸಮಯ ಮತ್ತು ಮಾರ್ಗಗಳ ಕುರಿತು ಪ್ರಯಾಣಿಕರಿಗೆ ಅಗತ್ಯ ಮಾಹಿತಿ ನೀಡಲು ಹಾಗೂ ಸುಗಮ ಪ್ರಯಾಣಕ್ಕೆ ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೆಎಸ್‌ಆರ್‌ಟಿಸಿ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಸಿದ್ದಾರೆ.

# ಪಠ್ಯೇತರ ಚಟುವಟಿಕೆಗಳಿಂದ ವಿದ್ಯಾರ್ಥಿಗಳ ಪ್ರತಿಭೆ ಅನಾವರಣ

**ಸಮಾಲೋಚನೆ ಸುದ್ದಿ ಬ್ಯಾಡಗಿ**

ಕಾಲೇಜು ಶಿಕ್ಷಣವು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಪ್ರಮುಖ ಹಂತವಾಗಿದ್ದು, ವಿದ್ಯಾರ್ಥಿಗಳು ಲಭ್ಯವಿರುವ ಶೈಕ್ಷಣಿಕ ಹಾಗೂ ಪಠ್ಯೇತರ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಸಾಧನೆ ಮಾಡಬೇಕು ಎಂದು ಆಂಗ್ಲಭಾಷಾ ಉಪನ್ಯಾಸಕ ಡಿ.ಬಿ. ಕುಸಗೂರ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ವರ್ಷದ ಬಿ.ಎ ಮತ್ತು ಬಿ.ಕಾಂ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪದವಿ ಶಿಕ್ಷಣದ ಅವಧಿಯಲ್ಲಿ ಹೊಸ ಕೌಶಲ್ಯಗಳನ್ನು ಕಲಿಯುವುದರೊಂದಿಗೆ ಸಮಾಜದ ಬಗ್ಗೆ ಜವಾಬ್ದಾರಿ, ಮಾನವೀಯ ಮೌಲ್ಯ ಹಾಗೂ ಶಿಸ್ತನ್ನು ಬೆಳೆಸಿ ಕೊಳ್ಳಬೇಕು ಎಂದು ಸಲಹೆ ನೀಡಿದರು.



ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ.ಮಲ್ಲಿಕಾರ್ಜುನ ಕಡ್ಡಿಪುಡಿ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಪಠ್ಯ ಚಟುವ ಟಿಕೆಗಳ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ತಮ್ಮಲ್ಲಿರುವ ಪ್ರತಿಭೆ, ಕೌಶಲ್ಯ ಹಾಗೂ ಸೃಜನಶೀಲತೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ಹಾವೇರಿ ಜಿಲ್ಲಾ ಉತ್ತಮ ಪ್ರಾಧ್ಯಾಪಕ ಪ್ರಶಸ್ತಿ ಪುರಸ್ಕೃತ ಹಾಗೂ ಸಹ ಪ್ರಾಧ್ಯಾಪಕ ಡಾ.ಎಂ.ಬಿ. ನಾಗಲಾಪುರ ಮಾತನಾಡಿ, ವಿದ್ಯಾರ್ಥಿ ಜೀವನವು ಕೇವಲ ಪಠ್ಯಪುಸ್ತಕಗಳಿಗೆ ಸೀಮಿತವಾಗಿರಬಾರದು. ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ, ಸಾಹಿತ್ಯ, ಭಾಷಣ, ಚರ್ಚೆ, ರಸಪ್ರಶ್ನೆ ಸೇರಿದಂತೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ಆತ್ಮವಿಶ್ವಾಸ, ನಾಯಕತ್ವ ಗುಣ, ಸಮಯ ನಿರ್ವಹಣೆ ಹಾಗೂ ತಂಡವಾಗಿ ಕಾರ್ಯನಿರ್ವಹಿಸುವಸಾಮರ್ಥ್ಯವೃದ್ಧಿಯಾಗುತ್ತದೆ. ಇಂತಹ ಚಟುವಟಿಕೆಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗುತ್ತವೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎಚ್.ಜಿ.ಸಣ್ಣಗೌಡರ ಪ್ರಥಮ ವರ್ಷದ ವಿದ್ಯಾರ್ಥಿಗಳು ಕಾಲೇಜಿನ ವಾತಾವರಣಕ್ಕೆ ಹೊಂದಿ ಕೊಂಡು, ಉಪನ್ಯಾಸಕರ ಮಾರ್ಗದರ್ಶನ ಪಡೆದು ಶೈಕ್ಷಣಿಕ ಪ್ರಗತಿಯತ್ತ ಗಮನ ಹರಿಸಬೇಕು. ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಂಡು ವಿವಿಧ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಕಾಲೇಜಿಗೆ ಹಾಗೂ ಪಾಲಕರಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ಡಾ.ಎಫ್.ಎಚ್.ಗಿಡ್ಡಣ್ಣನವರ ಸ್ವಾಗತಿಸಿದರು. ಪರಮೇಶ ಮುಳಗುಂದ ನಿರೂಪಿಸಿದರು. ಡಾ.ಸತೀಶ ವಂದಿಸಿದರು. ಕಾರ್ಯಕ್ರಮ ದಲ್ಲಿ ಡಾ.ದೇವೇಂದ್ರ ಬಿ.ಎನ್.ಡಾ. ಎಸ್.ಕೆ. ಪಾಟೀಲ್, ಡಾ.ಹನುಮಂತರಾಜು ಎನ್.ಬಿ. ಹನುಮಂತಗೌಡ ಡಿ.ಎಂ.ಹಾಗೂಡಿ.ಶಿವಪ್ಪವಿದ್ಯಾರ್ಥಿಗಳುಸೇರಿದಂತೆ ಹಲವರು ಉಪಸ್ಥಿತರಿದ್ದರು ಉಪಸ್ಥಿತರಿದ್ದರು.

# ಸಾರ್ವಜನಿಕ ಆಸ್ಪತ್ರೆಯಲ್ಲಿ ಆಕಸ್ಮಿಕ ಬೆಂಕಿ ಹಚ್ಚಿ ಹಳೆಯ ಬೆಡ್, ಬೆಡ್‌ಶೀಟ್ ಹಲವು ಸೇರಿದಂತೆ ವಸ್ತುಗಳಿಗೆ ಹಾನಿ

**ಸಮಾಲೋಚನೆ ಸುದ್ದಿ ಬ್ಯಾಡಗಿ**

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಹಳೆಯ ಕಟ್ಟಡದಲ್ಲಿನ ಕೋಣೆಯಲ್ಲಿ ಆಕಸ್ಮಿಕ ಬೆಂಕಿ ಅವಘಡ ಸಂಭವಿಸಿದ್ದು ಹಳೆಯ ಬೆಡ್ ಗಳು, ಹಾಗೂ ಇತರೆ ವಸ್ತುಗಳು ಬೆಂಕಿಗೆ ಆಹುತಿಯಾಗಿರುವ ಘಟನೆ ಶುಕ್ರವಾರ ಬೆಳಿಗ್ಗೆ ನಡೆದಿದೆ.

ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಹಿಂಭಾದಲ್ಲಿರುವ ಹಳೆಯ ಕಟ್ಟಡದಲ್ಲಿ ಆಸ್ಪತ್ರೆಯಲ್ಲಿ ಬಳಸಗಿರುವ ಹಳೆಯ ಬೆಡ್, ಬೆಡ್‌ಶಿಟ್ ಸೇರಿದಂತೆ ಇನ್ನಿತರೆ ನಿರುಪಯುಕ್ತ ವಸ್ತುಗಳನ್ನ ಇರಿಸಲಾಗಿತ್ತು. ಶುಕ್ರವಾರ ಬೇಳಿಗ್ಗೆ ಏಕಾ ಏಕಿ ಕಟ್ಟದಲ್ಲಿ ಬೆಂಕಿ ಕಾಣಿಸಿಕೊಂ ಡಿದ್ದು, ಬಟ್ಟೆಯ ವಸ್ತುಗಳಾದ ಪರಿಣಾಮ ಕ್ಷಣಾರ್ದದಲ್ಲಿ ಬೆಂಕಿ ತೀವ್ರತೆ ಹೆಚ್ಚಾಗಿದೆ.

ಬೆಂಕಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ಹಾಗೂ ಆಸ್ಪತ್ರೆ ಸಿಬ್ಬಂದಿ ಅಗ್ನಿ ನಂದಿಸುವ ಕಾರ್ಯಕ್ಕೆ ಮುಂದಾಗಿ ನಂತರ ಅಗ್ನಿಶಾಮಕ ದಳಕ್ಕೆ ಕರೆ ಮಾಡಿದ್ದಾರೆ ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸಿದ ಪರಿಣಾಮ ಹೆಚ್ಚಿನ ಅನಾಹುತ ತಪ್ಪಿದೆ ಎನ್ನಲಾಗಿದೆ. ಬೆಂಕಿಯ ಕಿಡಿ ಆಸ್ಪತ್ರೆಯ ಇತರೆ ಭಾಗಗಳಿಗೆ ವ್ಯಾಪಿಸಿದ್ದರೆ ಗಂಭೀರ ಪರಿಸ್ಥಿತಿ ನಿರ್ಮಾ ಣವಾಗುವ ಸಾಧ್ಯತೆ ಇತ್ತು.

ಬೆಂಕಿಯ ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ಹಾವೇರಿ ಜಿಲ್ಲಾ ಡಿಎಚ್‌ಓ ನಾಗರಾಜ ಹಾಗೂ ಆಡಳಿತ ವೈದ್ಯಾಧಿಕಾರಿ ಡಾ.ರಾಘವೇಂ ದ್ರ ಆಗಮಿಸಿ ಪರಿಶೀಲನೆ ನಡೆಸಿದರು ಮತ್ತು ಆಸ್ಪತ್ರೆಯಲ್ಲಿದ್ದ ರೋಗಿಗಳ ಆರೋಗ್ಯ ವಿಚಾರಣೆ ನಡೆಸಿದರು.



## ಕಿಡಿಗೇಡಿಗಳಿಂದ ಬೆಂಕಿ ಅನುಮಾನ

**ಆಸ್ಪತ್ರೆಯ ಹಿಂದಿನ ಕಟ್ಟಡದ ಕೋಣೆಯಲ್ಲಿದ್ದ ಇಟ್ಟಿದ್ದ ಹಳೆಯ ವಸ್ತುಗಳಿಗೆ ಉದ್ದೇಶಪೂರ್ವಕವಾಗಿ ಯಾರೋ ಕಿಡಿಗೇಡಿಗಳು ಬೆಂಕಿ ಹಚ್ಚಿರಬಹುದು ಎಂಬ ಅನುಮಾನ ಆಸ್ಪತ್ರೆಯಲ್ಲಿನ ಸಾರ್ವಜನಿಕರಿಂದ ವ್ಯಕ್ತವಾಗಿದ್ದು, ಸ್ಥಳಿಯ ಪೋಲಿಸರು ಸಿಸಿ ಟಿವಿ ಪರಿ ಶೀಲಿಸಿ ಪತ್ತೆಹಚ್ಚಬೇಕಾಗಿದೆ. ಸಾರ್ವಜನಿಕರ ಜೀವ ಮತ್ತು ಆರೋಗ್ಯಕ್ಕೆ ಸಂಬಂಧಿಸಿದ ಆಸ್ಪತ್ರೆಯ ಆವರಣದಲ್ಲಿಯೇ ಇಂತಹ ಕೃತ್ಯ ನಡೆದಿರುವುದು ಆತಂಕಕ್ಕೆ ಕಾರಣವಾಗಿದೆ.**

